ಕರ್ನಾಟಕ ಸರ್ಕಾರ

ಸಂಖ್ಯೆ: ಕಾಶಿಇ/ಹೆಚ್.ಆರ್.ಎಂ.ಎಸ್/07/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 20/12/2023

## ಸುತ್ತೋಲೆ

ವಿಷಯ: ಸರ್ಕಾರಿ ಸೇವೆಗೆ ಸೇರ್ಪಡೆಗೊಂಡಿರುವ ಎಲ್ಲಾ ಅಧಿಕಾರಿ / ನೌಕರರ ಸೇವಾ ವಹಿಯನ್ನು Electronic Service Register (ESR) ನಲ್ಲಿಯೇ ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: 1. ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ 2.0 ನಿರ್ದೇಶನಾಲಯ, ಆರ್ಥಿಕ ಇಲಾಖೆ, ಇವರ ಪತ್ರ ಸಂಖ್ಯೆ: FD/HRMS0H-2(OTH)/1/2021 ದಿನಾಂಕ: 07/11/2023

2. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ: 24/04/2023

3. ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 4 ಸನಿತಿ 2023 ದಿನಾಂಕ: 17/03/2023

*****

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಸರ್ಕಾರದ ಸೇವೆಗೆ ಈಗಾಗಲೇ ನೇಮಕಗೊಂಡಿರುವ ಹಾಗೂ 2021-22ನೇ ಸಾಲಿನಿಂದ ನೇಮಕಗೊಳ್ಳುವ ಎಲ್ಲಾ ಸರ್ಕಾರಿ ಅಧಿಕಾರಿ / ನೌಕರರ ಸೇವಾ ವಿವರಗಳನ್ನು ಹೆಚ್.ಆರ್.ಎಂ.ಎಸ್-2.0 ಯೋಜನೆಯ ಭಾಗವಾದ ವಿದ್ಯುನ್ಮಾನ ಸೇವಾ ವಹಿ (Electronic Service Register - ESR) ನಲ್ಲಿಯೇ ಅನುಷ್ಠಾನಗೊಳಿಸಲು ಹಾಗೂ ಇದರ ಭಾಗವಾಗಿ ಪ್ರಸ್ತುತ ಹೆಚ್.ಆರ್.ಎಂ.ಎಸ್-1 ತಂತ್ರಾಂಶದಲ್ಲಿ ಲಭ್ಯವಿರುವ ಸರ್ಕಾರಿ ಅಧಿಕಾರಿ / ನೌಕರರ ಸೇವಾ ವಿವರಗಳನ್ನು ESR ಗೆ ವರ್ಗಾಯಿಸಲು ಸರ್ಕಾರದ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದ್ದು, ಸದರಿ ಮಾಹಿತಿಗಳನ್ನು ESR ಗೆ ವರ್ಗಾಯಿಸಿದ ನಂತರ ಯಾವುದೇ ತಿದ್ದುಪಡಿ ಮಾಡಲು ಅವಕಾಶವಿಲ್ಲದಿರುವ ಕಾರಣ ಹೆಚ್.ಆರ್.ಎಂ.ಎಸ್-1 ತಂತ್ರಾಂಶದಲ್ಲಿ ಲಭ್ಯವಿರುವ ತಮ್ಮ ಕಛೇರಿ / ಕಾಲೇಜಿನ ಎಲ್ಲಾ ಸರ್ಕಾರಿ ಅಧಿಕಾರಿ / ನೌಕರರುಗಳ ಸೇವಾ ವಹಿಯ ಪೂರ್ಣ ಮಾಹಿತಿಯನ್ನು ಈ ಕೂಡಲೇ ಪರಿಶೀಲಿಸಿ, ಅವಶ್ಯಕವಿದ್ದಲ್ಲಿ ಸರಿಪಡಿಸುವಂತೆ ಈಗಾಗಲೇ ಉಲ್ಲೇಖ(2)ರ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

ತತ್ಸಂಬಂಧ, ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಇದುವರೆವಿಗೂ ಸರಿಪಡಿಸಿಕೊಳ್ಳದ ಅಪೂರ್ಣ ಮಾಹಿತಿಗಳದ್ದಲ್ಲಿ, ಎಲ್ಲಾ ಡಿ.ಡಿ.ಓ ಗಳು ಈ ಬಗ್ಗೆ ವೈಯಕ್ತಿಕ ಗಮನ ಹರಿಸಿ ತಮ್ಮ ಕಛೇರಿಯ ಎಲ್ಲಾ ಸರ್ಕಾರಿ ಅಧಿಕಾರಿ/ನೌಕರರುಗಳ ವೈಯಕ್ತಿಕ ಮಾಹಿತಿ, ಸೇವಾ ವಹಿ ಹಾಗೂ ಇತರೇ ಎಲ್ಲಾ ಮಾಹಿತಿಗಳನ್ನು ಪರಿಶೀಲಿಸಿ, ತಪ್ಪಿದಲ್ಲಿ ಸರಿಪಡಿಸಿಕೊಂಡು ಸದರಿ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

ಅಡಕ: ಉಲ್ಲೇಖ(1)ರ ಪತ್ರದ ಪ್ರತಿ

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:-

1. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ಪ್ರಾದೇಶಿಕ ಜಂಟಿನಿರ್ದೇಶಕರುಗಳು ಹಾಗೂ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರವರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಸುತ್ತೋಲೆಯನ್ನು ಪ್ರಕಟಿಸಲು.
2. ಕಛೇರಿ ಪ್ರತಿ.